# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ, ಕಲಬುರಗಿ

**ಅಧಿಸೂಚನೆ ಸಂಖ್ಯೆ: ಜಿನ್ಯಾಕ/ಆಡಳಿತ/ 04 /2018 ಕಲಬುರಗಿ ದಿನಾಂಕ: 03-11-2018**

***

ವಿಷಯ: ಶೀಘ್ರಲಿಪಿಗಾರರು, ಬೆರಳಚ್ಚುಗಾರರು, ಬೆರಳಚ್ಚು ನಕಲುಗಾರರು, ಆದೇಶ ಜಾರಿಕಾರರು ಮತ್ತು ಜವಾನ ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಬಗ್ಗೆ .

ಉಲ್ಲೇಖ: ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ: LCA-II/128/2012 ದಿನಾಂಕ : 18.09.2018.

********

ಮೇಲ್ಕಂಡ ಅಧಿಸೂಚನೆಯನ್ವಯ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಕಲಬುರಗಿ ಘಟಕದಲ್ಲಿ ಖಾಲಿ ಇರುವ ಶೀಘ್ರಲಿಪಿಗಾರರು-**12**, ಬೆರಳಚ್ಚುಗಾರರು-**5,** ಬೆರಳಚ್ಚುನಕಲುಗಾರರು **5,** ಆದೇಶ ಜಾರಿಕಾರರು-**03** ಮತ್ತು ಜವಾನರು-**08** ಹುದ್ದೆಗಳಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ **05.12.2018** ರ ಸಾಯಂಕಾಲ **5** ಗಂಟೆಯವರೆಗೆ.

ಅರ್ಜಿ ಸಲ್ಲಿಸಬೇಕಾದ ವಿಳಾಸ: ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಕಲಬುರಗಿ- **585102**.

ಅರ್ಜಿ ನಮೂನೆಯ ಬೆರಳಚ್ಚು ಪ್ರತಿ / ಗಣಕೀಕೃತ ಪ್ರತಿಯಲ್ಲಿಯೇ ಅಭ್ಯರ್ಥಿಗಳು ತಮ್ಮ ಸ್ವಂತ ಕೈಬರಹದಿಂದ ಎಲ್ಲಾ ಅಂಕಣಗಳನ್ನು ಜಾಗರೂಕತೆಯಿಂದ ಭರ್ತಿ ಮಾಡಿ ದಿನಾಂಕ **05.12.2018** ರ ಸಂಜೆ **05-00** ಗಂಟೆಯೊಳಗೆ ಈ ಕಚೇರಿಗೆ ಸಲ್ಲಿಸತಕ್ಕದ್ದು.

ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಸಂಬಂಧಿತ ಹುದ್ದೆಯ ಲಕೋಟೆಯ ಮೇಲೆ ಕಡ್ಡಾಯವಾಗಿ ತಾವು ಸಲ್ಲಿಸಲಚ್ಛಿಸುವ ಹುದ್ದೆಯ ಹೆಸರನ್ನು ದಪ್ಪ ಅಕ್ಷರಗಳಲ್ಲಿ ತಪ್ಪದೇ ನಮೂದಿಸಬೇಕು.

## 1) ಶೀಘ್ರಲಿಪಿಗಾರರು -12

ವೇತನ ಶ್ರೇಣಿಃ 27650-650-29600-750-32600-850-36000-950-39800-1100-46400-1250-52650

**ಹೈದ್ರಾಬಾದ-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗಾಗಿ ಸ್ಥಳೀಯ ಹುದ್ದೆಗಳಿಗೆ ಗುರುತಿಸಿರುವ ಮೀಸಲಾತಿ (Hyderabad-Karnataka Local Cadre): 09**

| ಮೀಸಲಾತಿ | ಇತರೇ | ಮಹಿಳೆಯರು | ಗ್ರಾಮೀಣ | ಮಾಜಿ ಸೈನಿಕರು | ಕನ್ನಡ ಮಾಧ್ಯಮ | ಯೋಜನೆ ನಿರಾಶ್ರಿತರು | ಅಂಗವಿಕಲರು | ಒಟ್ಟು |
|---|---|---|---|---|---|---|---|---|
| ಪರಿಶಿಷ್ಟ ಜಾತಿ | – | – | – | – | – | -- | **1*** | **1** |
| ಪ್ರವರ್ಗ-1 | 1 | – | – | – | – | – | **-** | **1** |
| ಪ್ರವರ್ಗ-2ಎ | – | 1 | – | – | – | – | **1*** | **2** |
| ಪ್ರವರ್ಗ-2ಬಿ | 1 | – | – | – | – | – | **-** | **1** |
| ಸಾಮಾನ್ಯ ಅಭ್ಯರ್ಥಿ | | 1 | 1 | 1 | 1 | - | **-** | **4** |
| ಒಟ್ಟು | **2** | **2** | **1** | **1** | **1** | | **2** | **09** |

* ಅಂಗವಿಕಲರಿಗೆ ಮೀಸರಿಸಿದ ಹುದ್ದೆಗಳು ದೃಷ್ಟಿ ಮಾಂಧ್ಯವುಳ್ಳ ಅಭ್ಭರ್ಥಿಗಳಿಗೆ ಮೀಸಲಾಗಿದೆ ಹಾಗೂ ಇವು ಹಿಂಬಾಕಿ ಹುದ್ದೆಗಳಾಗಿವೆ. ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 235 ಸೇನೇನಿ 2012 ಬೆಂಗಳೂರು ದಿನಾಂಕ 22.11.2015 ರ ಪ್ರಕಾರ ಸದರಿ ಅಂಗವಿಕಲತೆ ಹೊಂದಿರುವ ಅಭ್ಭರ್ಥಿಗಳು ಲಭ್ಯವಿಲ್ಲದೆ ಹೋದಲ್ಲಿ ಆಯಾ ಪ್ರವರ್ಗದ ಇತರೆ ಅಂಗವಿಕಲತೆವುಳ್ಳ ಅರ್ಹ ವಿಕಲಚೇತನ ಅಭ್ಭರ್ಥಿಯನ್ನು ಪರಿಗಣಿಸಲಾಗುವುದು. ಒಂದು ವೇಳೆ ಯಾವುದೇ ವಿಕಲಚೇತನ ಅಭ್ಯರ್ಥಿ ಲಭ್ಯವಿಲ್ಲದಿದ್ದಲ್ಲ, ಆಯಾ ಪ್ರವರ್ಗದ "ಇತರೆ" ಅರ್ಹ ಅಭ್ಯರ್ಥಿಯನ್ನು ಪರಿಗಣಿಸಲಾಗುವುದು.

**ಉಳಿಕೆ ಮೂಲವೃಂದದ ಹುದ್ದೆಗಳಿಗೆ ಸ್ಥಳಿಯೇತರ ಅಭ್ಯರ್ಥಿಗಳಿಗೆ ಗುರುತಿಸಿರುವ ಮೀಸಲಾತಿ (Residual Parent Cadre) :03**

| ಮೀಸಲಾತಿ | ಇತರೇ | ಮಹಿಳೆಯರು | ಗ್ರಾಮೀಣ | ಮಾಜಿ ಸೈನಿಕರು | ಕನ್ನಡ ಮಾಧ್ಯಮ | ಯೋಜನೆ ನಿರಾಶ್ರಿತರು | ಅಂಗವಿಕಲರು | ಒಟ್ಟು |
|---|---|---|---|---|---|---|---|---|
| ಪ್ರವರ್ಗ-3ಬಿ | 1 | - | - | - | - | - | **-** | **1** |
| ಸಾಮಾನ್ಯ ಅಭ್ಯರ್ಥಿ | 2 | - | - | - | - | - | **-** | **2** |
| ಒಟ್ಟು | **3** | **-** | **-** | **-** | **-** | **-** | **-** | **3** |

**ವಿದ್ಯಾರ್ಹತೆ** ಎ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದ ಒಳಗಾಗಿ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ನಡೆಸುವ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು.

ಬಿ ಕನ್ನಡ ಮತ್ತ ಆಂಗ್ಲ ಬೆರಳಚ್ಚು ಪ್ರೌಢ ದರ್ಜೆ (ಸೀನಿಯರ್ ಗ್ರೇಡ್) ಹಾಗೂ ಕನ್ನಡ ಮತ್ತು ಆಂಗ್ಲ ಶೀಘ್ರಲಿಪಿ ಪ್ರೌಢ ದರ್ಜೆ (ಸೀನಿಯರ್ ಗ್ರೇಡ್) ಪರೀಕ್ಷೆಯಲ್ಲಿ ತೇರ್ಗಡೆ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಹೊಂದಿರಬೇಕು.

ಆಯ್ಕೆಯ ವಿಧಾನ: ಎ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳ) (ತಿದ್ದುಪಡಿ) ನೇಮಕಾತಿ ನಿಯಮಗಳ 2007 ರ ಪ್ರಕಾರ ನೇಮಕಾತಿಯನ್ನು ನಡೆಸಲಾಗುವುದು+.

ಬಿ ಕನ್ನಡ ಮತ್ತು ಆಂಗ್ಲ ಭಾಷೆಗಳನಲ್ಲಿ ಉಕ್ತಲೇಖನವನ್ನು ಕೊಟ್ಟು ಕಂಪ್ಯೂಟರ್ ನಲ್ಲಿ ಬೆರಳಚ್ಚು ಮಾಡಿಸಿ ಅರ್ಹತಾ ಪರೀಕ್ಷೆ ನಡೆಸಲಾಗುವುದು

## 2) ಬೆರಳಚ್ಚುಗಾರರು-5

**ವೇತನ ಶ್ರೇಣಿ: 21400-500-22400-550-24600-600-27000-650-29600-750-32600-850-36000-950-39800-1100-42000.**

**ಹೆದ್ರಾಬಾದ-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗಾಗಿ ಸ್ಥಳೀಯ ಹುದ್ದೆಗಳಿಗೆ ಗುರುತಿಸಿರುವ ಮೀಸಲಾತಿ (Hyderabad-Karnataka Local Cadre)-02**

| ಮೀಸಲಾತಿ | ಇತರೆ | ಮಹಿಳೆ | ಗ್ರಾಮೀಣ | ಮಾಜಿ ಸೈನಿಕ | ಒಟ್ಟು |
|---|---|---|---|---|---|
| ಪ್ರವರ್ಗ 2 ಎ | – | – | – | 1 | **1** |
| ಸಾಮಾನ್ಯ ಅಭ್ಯರ್ಥಿ | 1 | – | – | – | **1** |
| **ಒಟ್ಟು** | **1** | **-** | **-** | **1** | **2** |

**ಉಳಿಕೆ ಮೂಲ ವೃಂದದ ಹುದ್ದೆಗಳಿಗೆ ಸ್ಥಳಿಯೇತರ ಅಭ್ಯರ್ಥಿಗಳಿಗೆ ಗುರುತಿಸಿರುವ ಮೀಸಲಾತಿ (Residual Parent Cadre) :03**

| ಮೀಸಲಾತಿ | ಇತರೆ | ಮಹಿಳೆ | ಗ್ರಾಮೀಣ | ಕನ್ನಡ ಮಾಧ್ಯಮ | ಅಂಗವಿಕಲರು | ಒಟ್ಟು |
|---|---|---|---|---|---|---|
| ಪ್ರವರ್ಗ-**2** ಬಿ | – | – | – | - | 1 | **1** |
| ಪ್ರವರ್ಗ-**2** ಎ | – | 1 | – | – | – | **1** |
| ಸಾಮಾನ್ಯ ಅಭ್ಯರ್ಥಿ | – | – | | 1 | **-** | **1** |
| **ಒಟ್ಟು** | **-** | **1** | **-** | **1** | **1** | **3** |

ವಿದ್ಯಾರ್ಹತೆ ಎ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದ ಒಳಗಾಗಿ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ನಡೆಸುವ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು.

ಬಿ ಕನ್ನಡ ಮತ್ತ ಆಂಗ್ಲ ಬೆರಳಚ್ಚು ಪ್ರೌಢ ದರ್ಜೆ (ಸೀನಿಯರ್ ಗ್ರೇಡ್) ಪರೀಕ್ಷೆಯಲ್ಲಿ ತೇರ್ಗಡೆ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಹೊಂದಿರಬೇಕು.

ಆಯ್ಕೆಯ ವಿಧಾನ: ಎ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳ) (ತಿದ್ದುಪಡಿ) ನೇಮಕಾತಿ ನಿಯಮಗಳ 2007 ರ ಪ್ರಕಾರ ನೇಮಕಾತಿಯನ್ನು ನಡೆಸಲಾಗುವುದು+.

ಬಿ ಕನ್ನಡ ಮತ್ತು ಆಂಗ್ಲ ಭಾಷೆಗಳನಲ್ಲಿ ಉಕ್ತಲೇಖನವನ್ನು ಕೊಟ್ಟು ಕಂಪ್ಯೂಟರ್ ನಲ್ಲಿ ಬೆರಳಚ್ಚು ಮಾಡಿಸಿ ಅರ್ಹತಾ ಪರೀಕ್ಷೆ ನಡೆಸಲಾಗುವುದು

## 3) ಬೆರಳಚ್ಚು-ನಕಲುಗಾರರು-5

ವೇತನ ಶ್ರೇಣಿ: 21400-500-22400-550-24600-600-27000-650-29600-750-32600-850-36000-950-39800-1100-42000.

**ಹೈದ್ರಾಬಾದ-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗಾಗಿ ಸ್ಥಳೀಯ ಹುದ್ದೆಗಳಿಗೆ ಗುರುತಿಸಿರುವ ಮೀಸಲಾತಿ (Hyderabad-Karnataka Local Cadre)-04**

| ಮೀಸಲಾತಿ | ಇತರೇ | ಮಹಿಳೆಯರು | ಗ್ರಾಮೀಣ | ಮಾಜಿ ಸೈನಿಕರು | ಕನ್ನಡ ಮಾಧ್ಯಮ | ಯೋಜನೆ ನಿರಾಶ್ರಿತರು | ಅಂಗವಿಕಲರು | ಒಟ್ಟು |
|---|---|---|---|---|---|---|---|---|
| ಪರಿಶಿಷ್ಟ ಜಾತಿ | – | 01 | – | – | – | -- | **1*** | **2** |
| ಪ್ರವರ್ಗ-2ಎ | – | - | - | - | - | - | **1*** | **1** |
| ಸಾಮಾನ್ಯ ಅಭ್ಯರ್ಥಿ | - | - | 1 | - | - | - | **-** | **1** |
| ಒಟ್ಟು | **-** | **1** | **1** | **-** | **-** | **-** | **2** | **4** |

ಅಂಗವಿಕಲರಿಗೆ ಮೀಸರಿಸಿದ ಹುದ್ದೆಗಳು ದೃಷ್ಟಿ ಮಾಂಧ್ಯವುಳ್ಳ ಅಭರ್ಥಿಗಳಿಗೆ ಮೀಸಲಾಗಿದೆ ಹಾಗೂ ಇವು ಹಿಂಬಾಕಿ ಹುದ್ದೆಗಳಾಗಿವೆ. ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 235 ಸೇನೇನಿ 2012 ಬೆಂಗಳೂರು ದಿನಾಂಕ 22.11.2015 ರ ಪ್ರಕಾರ ಸದರಿ ಅಂಗವಿಕಲತೆ ಹೊಂದಿರುವ ಅಭರ್ಥಿಗಳು ಲಭ್ಯವಿಲ್ಲದೆ ಹೋದಲ್ಲಿ ಆಯಾ ಪ್ರವರ್ಗದ ಇತರೆ ಅಂಗವಿಕಲತೆವುಳ್ಳ ಅರ್ಹ ವಿಕಲಚೇತನ ಅಭ್ಯರ್ಥಿಯನ್ನು ಪರಿಗಣಿಸಲಾಗುವುದು. ಒಂದು ವೇಳೆ ಯಾವುದೇ ವಿಕಲಚೇತನ ಅಭ್ಯರ್ಥಿ ಲಭ್ಯವಿಲ್ಲದಿದ್ದಲ್ಲ, ಆಯಾ ಪ್ರವರ್ಗದ "ಇತರೆ" ಅರ್ಹ ಅಭ್ಯರ್ಥಿಯನ್ನು ಪರಿಗಣಿಸಲಾಗುವುದು.

**ಉಳಿಕೆ ಮೂಲ ವೃಂದದ ಹುದ್ದೆಗಳಿಗೆ ಸ್ಥಳಿಯೇತರ ಅಭ್ಯರ್ಥಿಗಳಿಗೆ ಗುರುತಿಸಿರುವ ಮೀಸಲಾತಿ (Residual Parent Cadre) :01**

| ಮೀಸಲಾತಿ | ಇತರೆ | ಮಹಿಳೆ | ಗ್ರಾಮೀಣ | ಕನ್ನಡ ಮಾಧ್ಯಮ | ಮಾಜಿ ಸೈನಿಕ | ಒಟ್ಟು |
|---|---|---|---|---|---|---|
| ಪ್ರವರ್ಗ-**3** ಎ | 1 | - | – | – | – | **1** |
| ಒಟ್ಟು | **1** | **-** | **-** | **-** | **-** | **1** |

ವಿದ್ಯಾರ್ಹತೆ ಎ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದ ಒಳಗಾಗಿ ಕರ್ನಾಟಕ ಫ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ನಡೆಸುವ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು.

ಬಿ ಕನ್ನಡ ಮತ್ತ ಆಂಗ್ಲ ಬೆರಳಚ್ಚು ಕಿರಿಯ ದರ್ಜೆ (ಜೂನಿಯರ್ ಗ್ರೇಡ್) ಪರೀಕ್ಷೆಯಲ್ಲಿ ತೇರ್ಗಡೆ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಹೊಂದಿರಬೇಕು.

ಆಯ್ಕೆಯ ವಿಧಾನಃ

ಎ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳ) (ತಿದ್ದುಪಡಿ) ನೇಮಕಾತಿ ನಿಯಮಗಳ 2007 ರ ಪ್ರಕಾರ ನೇಮಕಾತಿಯನ್ನು ನಡೆಸಲಾಗುವುದು+.

ಬಿ ಕನ್ನಡ ಮತ್ತು ಆಂಗ್ಲ ಭಾಷೆಗಳನಲ್ಲಿ ಉಕ್ತಲೇಖನವನ್ನು ಕೊಟ್ಟು ಕಂಪ್ಯೂಟರ್ ನಲ್ಲಿ ಬೆರಳಚ್ಚು ಮಾಡಿಸಿ ಅರ್ಹತಾ ಪರೀಕ್ಷೆ ನಡೆಸಲಾಗುವುದು

## 4) ಆದೇಶ ಜಾರಿಕಾರರು-3

ವೇತನ ಶ್ರೇಣಿಃ 19950-450-20400-500-22400-550-24600-600-27000-650-29600-750-32600-850-36000-950-37900.

**ಹೆದ್ರಾಬಾದ-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗಾಗಿ ಸ್ಥಳೀಯ ಹುದ್ದೆಗಳಿಗೆ ಗುರುತಿಸಿರುವ ಮೀಸಲಾತಿ (Hyderabad-Karnataka Local Cadre)-01**

| ಮೀಸಲಾತಿ | ಇತರೆ | ಮಹಿಳೆ | ಗ್ರಾಮೀಣ | ಕನ್ನಡ ಮಾಧ್ಯಮ | ಮಾಜಿ ಸೈನಿಕ | ಒಟ್ಟು |
|---|---|---|---|---|---|---|
| ಸಾಮಾನ್ಯ ಅಭ್ಯರ್ಥಿ | - | - | – | – | 1 | **1** |
| ಒಟ್ಟು | **-** | **-** | **-** | **-** | **1** | **1** |

**ಉಳಿಕೆ ಮೂಲ ವೃಂದದ ಹುದ್ದೆಗಳಿಗೆ ಸ್ಥಳಿಯೇತರ ಅಭ್ಯರ್ಥಿಗಳಿಗೆ ಗುರುತಿಸಿರುವ ಮೀಸಲಾತಿ (Residual Parent Cadre) :02**

| ಮೀಸಲಾತಿ | ಇತರೆ | ಮಹಿಳೆ | ಗ್ರಾಮೀಣ | ಕನ್ನಡ ಮಾಧ್ಯಮ | ಮಾಜಿ ಸೈನಿಕ | ಒಟ್ಟು |
|---|---|---|---|---|---|---|
| ಪ್ರವರ್ಗ-**2** ಬಿ | 1 | - | – | – | – | **1** |
| ಸಾಮಾನ್ಯ ಅಭ್ಯರ್ಥಿ | - | - | 1 | - | - | **1** |
| ಒಟ್ಟು | 1 | - | 1 | - | - | **2** |

ವಿದ್ಯಾರ್ಹತೆ

1 ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದ ಒಳಗಾಗಿ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ನಡೆಸುವ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು

2 ಲಘು (LMV) ಹಾಗೂ ಭಾರಿ (HMV) ವಾಹನ ಚಾಲನಾ ಪತ್ರ ಹೊಂದಿದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

ಆಯ್ಕೆ ವಿಧಾನ

1 ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳ) (ತಿದ್ದುಪಡಿ) ನೇಮಕಾತಿ ನಿಯಮಗಳ 2007 ರ ಪ್ರಕಾರ ನೇಮಕಾತಿಯನ್ನು ನಡೆಸಲಾಗುವುದು.

2 ಆದೇಶ ಜಾರಿಕಾರರ ಹುದ್ದೆಗೆ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಪಡೆದ ಗರಿಷ್ಠ ಅಂಕಗಳ ಅರ್ಹತೆಯ ಆಧಾರದ ಮೇಲೆ ಒಂದು ಹುದ್ದೆಗೆ 25 ಅಭ್ಯರ್ಥಿಗಳನ್ನು ಮಾತ್ರ ಸಂದರ್ಶನಕ್ಕೆ ಕರೆಯಲಾಗುವುದು.

## 5) ಜವಾನರು-8

## ವೇತನ ಶ್ರೇಣಿಃ-17000-400-18600-450-20400-500-22400-550-24000-600-27000-650-28950.

**ಹೆದ್ರಾಬಾದ-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗಾಗಿ ಸ್ಥಳೀಯ ಹುದ್ದೆಗಳಿಗೆ ಗುರುತಿಸಿರುವ ಮೀಸಲಾತಿ (Hyderabad-Karnataka Local Cadre)**

| ಮೀಸಲಾತಿ | ಇತರೇ | ಮಹಿಳೆಯರು | ಗ್ರಾಮೀಣ | ಮಾಜಿ ಸೈನಿಕರು | ಕನ್ನಡ ಮಾಧ್ಯಮ | ಯೋಜನೆ ನಿರಾಶ್ರಿತರು | ಅಂಗವಿಕಲರು | ಒಟ್ಟು |
|---|---|---|---|---|---|---|---|---|
| ಪರಿಶಿಷ್ಟ ಜಾತಿ | - | - | 1 | - | - | - | **-** | **1** |
| ಪ್ರವರ್ಗ-1 | - | - | 1 | - | - | - | **1** | **2** |
| ಪ್ರವರ್ಗ-2ಎ | - | 1 | - | - | - | - | **-** | **1** |
| ಸಾಮಾನ್ಯ ಅಭ್ಯರ್ಥಿ | 2 | 1 | - | 1 | - | - | **-** | **4** |
| ಒಟ್ಟು | **2** | **2** | **2** | **1** | **-** | **-** | **1** | **8** |

**ವಿದ್ಯಾರ್ಹತೆ** ಃ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದ ಒಳಗಾಗಿ 7 ನೇ ತರಗತಿ ಪರೀಕ್ಷೆಯಲ್ಲಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು

**ಆಯ್ಕೆ ವಿಧಾನ** 1 ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳ) (ತಿದ್ದುಪಡಿ) ನೇಮಕಾತಿ ನಿಯಮಗಳ 2007 ರ ಪ್ರಕಾರ ನೇಮಕಾತಿಯನ್ನು ನಡೆಸಲಾಗುವುದು.

2 ಜವಾನ ಹುದ್ದೆಗೆ 7 ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಗರಿಷ್ಠ ಅಂಕಗಳ ಅರ್ಹತೆಯ ಆಧಾರದ ಮೇಲೆ ಒಂದು ಹುದ್ದೆಗೆ 10 ಅಭ್ಯರ್ಥಿಗಳನ್ನು ಮಾತ್ರ ಸಂದರ್ಶನಕ್ಕೆ ಕರೆಯಲಾಗುವುದು.

ಅಂಗವಿಕಲರಿಗೆ ಮೀಸರಿಸಿದ ಹುದ್ದೆಯು ದೃಷ್ಟಿ ಮಾಂಧ್ಯವುಳ್ಳ ಅಭ್ಯರ್ಥಿಗಳಿಗೆ ಮೀಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 235 ಸೇನೇನಿ 2012 ಬೆಂಗಳೂರು ದಿನಾಂಕ 22.11.2015 ರ ಪ್ರಕಾರ ಅಧಿಸೂಚಿಸಿರುವ ಅಂಗವಿಕಲತೆ ಹೊಂದಿರುವ ಅಭ್ಯರ್ಥಿ ಲಭ್ಯವಿಲ್ಲದೆ ಇದ್ದಲ್ಲಿ ಸದರಿ ರಿಕ್ತ ಸ್ಥಾನವನ್ನು ಮುಂದಿನ ನೇಮಕಾತಿಗೆ ಮುಂದಕ್ಕೊಯ್ಯಲಾಗುವುದು.

7 ನೇ ತರಗತಿಯ ಅಂಕಗಳು ಶ್ರೇಣಿಯಲ್ಲಿದ್ದರೆ ಅದನ್ನು ಅಂಕಗಳಾಗಿ ಪರಿವರ್ತಿಸಿ, ಗರಿಷ್ಟ ಅಂಕಗಳು ಮತ್ತು ಪಡೆದ ಅಂಕಗಳು ಒಟ್ಟು ಶೇಕಡಾವಾರು ನಮೂದು ಇರಬೇಕು ಮತ್ತು ಅಂಕಪಟ್ಟಿಯನ್ನು ಕಡ್ಡಾಯವಾಗಿ ಸಕ್ಷಮ ಪ್ರಾಧಿಕಾರದಿಂದ ಪಡೆದಿರಬೇಕು ಹಾಗೂ ಅಂಕಪಟ್ಟಿಯಲ್ಲಿ ತ್ರೈಮಾಸಿಕ ಅಂಕಗಳಿದ್ದರೆ, ಎಲ್ಲಾ ತ್ರೈಮಾಸಿಕ ಅಂಕಗಳನ್ನು ಕ್ರೋಢೀಕರಿಸಿದ ಅಂಕಪಟ್ಟಿಯನ್ನು ಮೂಲ ಅಂಕಪಟ್ಟಿಯ ಜೊತೆ ಸದರಿ ಅಂಕಪಟ್ಟಿಯನ್ನು ಸಹ ಅರ್ಜಿಯೊಂದಿಗೆ ಕಡ್ಡಾಯವಾಗಿ ಲಗತ್ತಿಸತಕ್ಕದ್ದು ಹಾಗೂ ಅಂಕಪಟ್ಟಿಯು ಕಡ್ಡಾಯವಾಗಿ ಸಂಬಂಧಿತ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ದೃಢೀಕರಿಸಲ್ಪಟ್ಟಿರತಕ್ಕದ್ದು ಮತ್ತು ಸದರಿ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ದೃಢೀಕರಿಸಲ್ಪಟ್ಟ ಅಂಕಪಟ್ಟಿಯನ್ನು ಸಂದರ್ಶನದ ಸಮಯದಲ್ಲಿ ತಪ್ಪದೇ ಹಾಜರು ಪಡಿಸತಕ್ಕದ್ದು ತಪ್ಪಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಮೇಲ್ಕಾಣಿಸಿದ 7 ನೇ ತರಗತಿಯ ಅಂಕಪಟ್ಟಿಯ ಈ ಅಧಿಸೂಚನೆಯಲ್ಲಿ ನಮೂದಿಸಿದ ಅರ್ಜಿಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು.

ಮೇಲ್ಕಾಣಿಸಿದ 7 ನೇ ತರಗತಿಯ ಅಂಕಗಳನ್ನೊಳಗೊಂಡ ಅಂಕಪಟ್ಟಿಯಾಗಿರಬೇಕು ಮತ್ತು ಬೇರೆ ರೀತಿಯಲ್ಲಿ ಅಂದರೆ ಗ್ರೇಡ ಇದ್ದ ಅಂಕಪಟ್ಟಿಗಳನ್ನು ಲಗತ್ತಿಸಿದರೆ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

7 ನೇ ತರಗತಿಯ ಅಂಕಗಳನ್ನೊಳಗೊಂಡ ಅಂಕಪಟ್ಟಿಯು ಸಂಬಂಧಿತ ಮುಖ್ಯೋಪಾಧ್ಯಾಯರಿಂದ ಸಹಿ ಹಾಗೂ ಶಾಲೆಯ ಮೊಹರನ್ನು ಹಾಕಿಸಿಕೊಂಡಿರಬೇಕು ಮತ್ತು ಆ ಅಂಕಪಟ್ಟಿಗೆ ಸಂಬಂಧಿತ ಕ್ಷೇತ್ರ ಶಿಕ್ಷಣಾಧಿಕಾರಿಯ ಮೇಲು ರುಜುವನ್ನು ಕಡ್ಡಾಯವಾಗಿ ಪಡೆದಿರಬೇಕು ಹಾಗೇ ಇಲ್ಲದ ಪಕ್ಷದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಲ್ಲಿ, ಮಹಿಳಾ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು, ಗ್ರಾಮೀಣ ಅಭ್ಯರ್ಥಿಗಳು ಮತ್ತು ಕನ್ನಡ ಮಾಧ್ಯಮ ಅಭ್ಯರ್ಥಿಗಳು ಮೀಸಲಾತಿಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಮತ್ತು ಇತರೆ ಹಿಂದುಳಿದ ವರ್ಗಗಳ ಹುದ್ದೆಗಳನ್ನು ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 3 ಸೇಹಿಮಾ 2015 ಬೆಂಗಳೂರು ದಿನಾಂಕ 03.10.2015 ರನ್ವಯ ಬ್ಯಾಕ್ ಲಾಗ್ ಎಂದು ಪರಿಗಣಿಸಿ ಮುಂದಕ್ಕೆ ಕೊಂಡೊಯ್ಯಲಾಗುವುದು.

ವಯೋಮಿತಿ : ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಕನಿಷ್ಟ 18 ವರ್ಷ ವಯೋಮಿತಿ ಹೊಂದಿರಬೇಕು ಹಾಗೂ ಈ ಕೆಳಗೆ ತಿಳಿಸಿರುವಂತೆ ಗರಿಷ್ಟ ವಯೋಮಿತಿ ಮೀರಿರಬಾರದು.

1 ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗ ಹಾಗೂ ಪ್ರವರ್ಗ 1 ರ ಹಿಂದುಳಿದ ವರ್ಗದ ಅಭ್ಯರ್ಥಿಗಳಿಗೆ ಸಂಬಂಧಿಸಿದ ಪ್ರಾಧಿಕಾರ ನೀಡುವ ದೃಢೀಕರಣಪತ್ರ ಹೊಂದಿದ್ದಲ್ಲಿ ಗರಿಷ್ಟ 40 ವರ್ಷ

2 ಪ್ರವರ್ಗ 2-ಎ, 2-ಬಿ , 3-ಎ ಮತ್ತು 3-ಬಿ ಗಳಿಗೆ ಸೇರಿದ ಅಭ್ಯರ್ಥಿಗಳಿಗೆ ಸಂಬಂಧಿಸಿದ ಪ್ರಾಧಿಕಾರ ನೀಡುವ ಜಾತಿ ದೃಢೀಕರಣ ಪತ್ರ ಹೊಂದಿದ್ದಲ್ಲಿ ಗರಿಷ್ಟ 38 ವರ್ಷ.

3 ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ 35 ವರ್ಷ.

ವಯೋಮಿತಿ ಸಡಿಲಿಕೆಃ

1. ಮಾಜಿ ಸೈನಿಕರಿಗೆ ಗರಿಷ್ಟ ವಯೋಮಿತಿಯಲ್ಲಿ ಅವರು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರವರೋ ಆ ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳ ಸಡಲಿಕೆ.
2. ಅಂಗವಿಕಲಗರಿಗೆ ಸಂಬಂಧಿಸಿದ ಪ್ರಾಧಿಕಾರ ನೀಡುವ ಪ್ರಮಾಣ ಪತ್ರ ಹೊಂದಿದ್ದಲ್ಲಿ ವಯೋಮಿತಿಯಲ್ಲಿ ಗರಿಷ್ಟ 10 ವರ್ಷಗಳ ಸಡಲಿಕೆ ನೀಡಲಾಗುವುದು.
3. ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ

ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಟ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳ ಅಥವಾ 10 ವರ್ಷಗಳ ಅವಧಿ, ಎರಡರಲ್ಲಿ ಯಾವುದೇ ಕಡಿಮೆಯೋ ಅಷ್ಟು ವರ್ಷಗಳ ಸಡಲಿಕೆಯನ್ನು ನೀಡಲಾಗುವುದು.

4. ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿಯ ಸಂಸ್ಥೆಗಳಲ್ಲಿ ಈಗ ಹುದ್ದೆಯನ್ನು ಹೊಂದಿದ ಪಕ್ಷದಲ್ಲಿ ಗರಿಷ್ಟ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸೇವೆ ಸಲ್ಲಿಸಿದ್ದರೆ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

5. ಅಭ್ಯರ್ಥಿಗಳು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣ ಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕನಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.

6. ಅಭ್ಯರ್ಥಿಗಳು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆ ಮೇರೆಗೆ ನೇಮಕಗೊಂಡ ಗ್ರಾಮ ಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದ ವರ್ಷಗಳು.

**ಎಲ್ಲಾ ಹುದ್ದೆಗಳಿಗಾಗಿ ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು :**

1. ಜನ್ಮ ದಿನಾಂಕದ ದೃಢೀಕರಣಕ್ಕಾಗಿ ಎಸ್.ಎಸ್.ಎಲ್.ಸಿ ಅಂಕಪಟ್ಟಿ/ವರ್ಗಾವಣೆ ಪಟ್ಟಿ/ಕ್ಯುಮುಲೇಟೀವ್ ರೆಕಾರ್ಡ್ ದಾಖಲಾತಿಗಳ ಪ್ರತಿಯನ್ನು ಸಲ್ಲಿಸಬೇಕು.
2. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ-ಡಿ ಯಲ್ಲಿ ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ-ಇ ಯಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ ಎಫ್ ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪಡೆದು ಪ್ರತಿಯನ್ನು ಸಲ್ಲಿಸಬೇಕು.
3. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದು ಪ್ರತಿಯನ್ನು ಸಲ್ಲಿಸಬೇಕು.
4. ಕನ್ನಡ ಮಾಧ್ಯಮ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಹಾಗೂ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಪಡೆದು ಪ್ರತಿಯನ್ನು ಸಲ್ಲಿಸಬೇಕು.
5. ಯೋಜನಾ ನಿರಾಶ್ರಿತ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಿಗದಿಪಡಿಸಿದ ನಮೂನೆಯಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪ್ರಮಾಣ ಪತ್ರವನ್ನು ಪಡೆದು ಪ್ರತಿಯನ್ನು ಸಲ್ಲಿಸಬೇಕು.
6 ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯೊದ/ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರವನ್ನು ಸಲ್ಲಿಸುವುದು.
7. ವಿಧವೆಯರು, ಜೀತ ಕಾರ್ಮಿಕರು ವಯೋಮಿತಿ ರಿಯಾಯ್ತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸುವುದು.
8. ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ವಯೋಮಿತಿ ಸಡಿಲಿಕೆಗಾಗಿ ಮೀಸಲಾತಿ ಕೋರಿದ್ದಲ್ಲಿ) ಪ್ರತಿಯನ್ನು ಸಲ್ಲಿಸಬೇಕು.

9. ಹೈದ್ರಾಬಾದ – ಕರ್ನಾಟಕ ಪ್ರದೇಶದ ಸ್ಥಳೀಯ ಅಭ್ಯರ್ಥಿಗಳಿಗಾಗಿ ಅರ್ಜಿ ಸಲ್ಲಿಸುವವರು ಸರಕಾರದ ಅಧಿಸೂಚನೆ ಸಂಖ್ಯೆಃ ಡಿಪಿಎಆರ್ಃ06ಃಪಿಎಲ್ಎಕ್ಸ್ಃ2012 ದಿನಾಂಕಃ 06-12-2013ರಲ್ಲಿ ಗೊತ್ತುಪಡಿಸಿದ ನಮೂನೆಯಲ್ಲಿ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪಡೆದ ಅರ್ಹತಾ ಪ್ರಮಾಣ ಪತ್ರ ಲಗತ್ತಿಸುವುದು.

10. ಅರ್ಜಿಯನ್ನು ಕಳುಹಿಸಲು ನಿಗದಿಪಡಿಸಿದ ದಿನಾಂಕದಿಂದ 6 ತಿಂಗಳ ಒಳಗೆ ಇಬ್ಬರು ಗೌರವಾನ್ವಿತ ವ್ಯಕ್ತಿಗಳು ನೀಡಿರುವ ನಡತೆ ಪ್ರಮಾಣ ಪತ್ರವನ್ನು ಸಲ್ಲಿಸುವುದು ಹಾಗೂ ಶಾಲಾ ನಡತೆ ಪ್ರಮಾಣ ಪತ್ರ ಲಗತ್ತಿಸುವುದು.

11. ಅಭ್ಯರ್ಥಿಗಳು ತಮ್ಮ ಅರ್ಜಿಯ ಜೊತೆ ಸ್ವ-ವಿಳಾಸವಿರುವ ಲಕೋಟೆಯನ್ನು ಸಲ್ಲಿಸಬೇಕು. ಸದರಿ ಲಕೋಟೆಯ ಮೇಲೆ ನೊಂದಾಯಿತ ಅಂಚೆಗೆ ತಗಲುವ ವೆಚ್ಚದ ಅಂಚೆ ಚೀಟಿ ಲಗತ್ತಿಸಿರಬೇಕು.

12. ಸರ್ಕಾರಿ ಅರೆ ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ಅರ್ಜಿಯನ್ನು ಸಮುಚಿತ ಮಾರ್ಗದ ಮುಖಾಂತರ ಸಲ್ಲಿಸಬೇಕು. ಇಲ್ಲವಾದಲ್ಲಿ ತಿರಸ್ಕರಿಸಲಾಗುವುದು.

13. ಸರಕಾರದ ಸುತ್ತೋಲೆ ಸಂಖ್ಯೆಃ ಸಿಆಸುಇಃ78ಃಹೈಕಕೋಃ2014 ಬೆಂಗಳೂರು ದಿನಾಂಕಃ22-05-2015 ರನ್ವಯ ಹೈದ್ರಾಬಾದ್-ಕರ್ನಾಟಕ ಸ್ಥಳೀಯ ವೃಂದದ ಮೀಸಲಾತಿ ಅಥವಾ ಮಿಕ್ಕುಳಿದ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೂ ಅರ್ಜಿ ಸಲ್ಲಿಸುವ ಬಗ್ಗೆ ಅರ್ಜಿಯಲ್ಲಿ ವಿವರವಾಗಿ ತೋರಿಸಿರುವಂತೆ ಆಯ್ಕೆಗಳನ್ನು ಮಾಡಲು ಅಭ್ಯರ್ಥಿಗಳಿಗೆ ಸೂಚಿಸಲಾಗಿದೆ.

14. ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ) ನಿಯಮಗಳು 1977 ಪ್ರಕಾರ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಎರಡು ವರ್ಷಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು. ಜವಾನ ಹುದ್ದೆಗೆ ಯಾವುದೇ ಇಲಾಖಾ ಪರೀಕ್ಷೆಗಳು ಇರುವುದಿಲ್ಲ.

15. ಶೀಘ್ರಲಿಪಿಗಾರರು, ಬೆರಳಚ್ಚುಗಾರರು ಮತ್ತು ಬೆರಳಚ್ಚು ನಕಲುಗಾರರು ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳು ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಮೂರು ತಿಂಗಳ ಒಳಗೆ ಸರ್ಕಾರವು ಅನುಮೋದಿಸಿದ ಏಜೆನ್ಸಿಯಲ್ಲಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಶೇಕಡಾ **50** ಅಂಕಗಳಿಗೆ ಕಡಿಮೆ ಇಲ್ಲದಂತೆ ಪಾಸು ಮಾಡತಕ್ಕದ್ದು.

16. ಶೀಘ್ರಲಿಪಿಗಾರರು, ಬೆರಳಚ್ಚುಗಾರರು ಮತ್ತು ಬೆರಳಚ್ಚು ನಕಲುಗಾರರು ಹುದ್ದೆಗಳಿಗೆ ಎಲ್ಲಾ ಅರ್ಹ ಅಭ್ಯರ್ಥಿಗಳಿಗೂ ಅರ್ಹತಾ ಪರೀಕ್ಷೆ ನಡೆಸಲಾಗುವುದು.

17. ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಸಂದರ್ಶನಕ್ಕೆ ಹಾಜರಾಗಬೇಕು ಹಾಗೂ ಸಂದರ್ಶನದ ಬಗ್ಗೆ ಮಾಹಿತಿ ಬರದಿರುವ ಅಭ್ಯರ್ಥಿಗಳು ಸಂದರ್ಶನಕ್ಕೆ ಅರ್ಹರಲ್ಲವೆಂದು ಭಾವಿಸಿಕೊಳ್ಳತಕ್ಕದ್ದು.

18. ಆಯ್ಕೆಯ ಸಂಬಂಧವಾದ ಸಂದರ್ಶನಕ್ಕೆ ಅನರ್ಹರಾದ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರ ನಡೆಸಲು ಅಸ್ಪದವಿರುವುದಿಲ್ಲ

19. ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಹಾಕಲು ಬಯಸುವವರು ಆಯಾ ಹುದ್ದೆಗಳಿಗೆ ಪ್ರತ್ಯೇಕವಾಗಿ ನಿಗದಿತ ಅರ್ಜಿ ನಮೂನೆಗಳಲ್ಲಿ ಅರ್ಜಿ ಸಲ್ಲಿಸತಕ್ಕದ್ದು.

20. ಮೌಖಿಕ ಪರೀಕ್ಷೆಯ ಸಮಯದಲ್ಲಿ ದಾಖಲೆಗಳ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು, ಶೈಕ್ಷಣಿಕ ವಿದ್ಯಾರ್ಹತೆ (ಜನ್ಮ ದಿನಾಂಕವನ್ನು ತೋರಿಸಲು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ, ಬೆರಳಚ್ಚು ಪರೀಕ್ಷೆಗಳ ಪ್ರಮಾಣ ಪತ್ರಗಳು, ಜಾತಿ ಪ್ರಮಾಣ ಪತ್ರ,

ಕಲಂ 371 (ಜೆ) ಅರ್ಹತ ಪ್ರಮಾಣ ಪತ್ರ ಹಾಗೂ ಇನ್ನಿತರೆ ಅವಶ್ಯಕ ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು, ಪರಿಶೀಲನೆ ಮಾಡುವಾಗ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳೆಂದು ಕಂಡುಬಂದಲ್ಲಿ, ಆಗ ಅವರ ಅಭ್ಯರ್ಥಿಯು ತಿರಸ್ಕೃತವಾಗುತ್ತದೆ ಹಾಗೂ ಅವರು ಸುಳ್ಳು ಮಾಹಿತಿ ನೀಡದ್ದಕ್ಕಾಗಿ ಕ್ರಿಮಿನಲ್ ಪ್ರಾಸಿಕ್ಯೂಷನ್‌ಗೂ ಸಹ ಗುರಿಯಾಗಬೇಕಾಗುತ್ತದೆ.

21 ಆಯ್ಕೆಯ ಸಂಬಂಧವಾಗಿ ಸಂದರ್ಶನಕ್ಕೆ ಅನರ್ಹರಾದ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರವಾಗಲ್ಲಿ ಅಥವವಾ ದೂರವಾಣಿ ಕರೆಗಳನ್ನು ನಡೆಸಲು / ಮಾಡಲು ಅವಕಾಶವಿರುವುದಿಲ್ಲ.

22. ಅಂಗವಿಕಲ ಹುದ್ದೆಗಳಿಗೆ ನಿರ್ದಿಷ್ಟಪಡಿಸಿದ ಅಂಗವಿಕಲ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಬೇರೆ ಅಂಗವಿಕಲತೆ ಇರುವವರನ್ನು ಆಯ್ಕೆಗೆ ಪರಿಗಣಿಸಲಾಗುವುದು.

23. ಮಾಹಿತಿಯನ್ನು ಸಂಪೂರ್ಣವಾಗಿ ಓದಿ ತಿಳಿದುಕೊಂಡು ನಿಗದಿತ ಅರ್ಜಿ ನಮೂನೆಯಲ್ಲಿ ಎಲ್ಲಾ ಕಾಲಂಗಳನ್ನು ನಿಗದಿತ ಉತ್ತರಗಳಿಂದ ಭರ್ತಿ ಮಾಡಿ ಸಹಿ ಮಾಡಿರತಕ್ಕದ್ದು. ಸರಿಯಾಗಿ ಕಾಲಂಗಳನ್ನು (ಅಂಕಣಗಳನ್ನು) ಭರ್ತಿ ಮಾಡದೇ ಹಾಗೂ ಸಹಿ ಇರದ ಮತ್ತು ಈ ಅಧಿಸೂಚನೆಯೊಂದಿಗೆ ಲಗತ್ತಿಸಿದ ಅರ್ಜಿ ನಮೂನೆಯನ್ನು ಹೊರತು ಪಡಿಸಿ ಬೇರೆ ನಮೂನೆಯಲ್ಲಿ ಸಲ್ಲಿಸಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

24 ಅರ್ಜಿ ನಮೂನೆಯು ಈ ಕಛೇರಿಯಲ್ಲಿ ಮಾರಾಟ ಮಾಡಲಾಗುವುದಿಲ್ಲ ಅಭ್ಯರ್ಥಿಗಳು ಅರ್ಜಿಯನ್ನು**https://districts.ecourts.gov.in/india/karnataka/kalaburagi/recruit** ಇಲ್ಲಿಂದ ಡೌನಲೋಡ ಮಾಡಿಕೊಂಡು ತುಂಬಿದ ಅರ್ಜಿಗಳನ್ನು ಇತರೆ ದಾಖಲಾತಿ ಪ್ರತಿಯೊಂದಿಗೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಕಲಬುರಗಿ ಇವರಿಗೆ ನಿಗದಿತ ಹಾಗೂ ಸಮಯದೊಳಗೆ ತಲುಪುವಂತೆ ಸಲ್ಲಿಸಬಹುದಾಗಿದೆ. ಕೊನೆಯ ದಿನಾಂಕದ ನಂತರ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ

25. ಅಂತಿಮವಾಗಿ ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮತಿಕಾತಿಯ ಸಂಬಂಧದಲ್ಲಿ ಯಾವುದೇ ಇತರೇ ಆಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಭಿಸಿರುವನೆಂದು ಕಂಡುಬಂದಲ್ಲಿ ಅವನು : ಅವಳು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೇ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

ಸಹಿ/-

(ಪಿ.ಟಿ. ಕಟ್ಟಿಮನಿ)

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು

ಕಲಬುರಗಿ.

**<u>ಅಧಿಸೂಚನೆಯ ನಕಲನ್ನು ಈ ಕೆಳಕಂಡವರ ಅವಗಾಹನೆಗಾಗಿ ಸಲ್ಲಿಸಲಾಗಿದೆ,</u>**

ವಿಲೇಖನಾಧಿಕಾರಿಗಳು, ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು **ಇವರಿಗೆ ಮುಖ ಪತ್ರದೊಂದಿಗೆ**

**<u>ಅಧಿಸೂಚನೆಯ ನಕಲನ್ನು ಈ ಕೆಳಕಂಡವರಿಗೆ ರವಾನಿಸಲಾಗಿದೆ</u>**

1. ಉಪನಿರ್ದೇಶಕರು, ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಕಲಬುರಗಿ ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ ಃ ವಿವಿಧ ಪತ್ರಿಕೆಗಳಲ್ಲಿ ಪ್ರಕಟಿಸುವಂತೆ ಕೋರಿ.
2. **ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಎಮ್.ಎಸ್.ಕೆ ಮಿಲ್ ರೋಡ್, ವೆಂಕಟೇಶ ನಗರ ಕಲಬುರಗಿ** 585102
3. ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಸಿಟಿ, ಬೆಂಗಳೂರು ಗ್ರಾಮಾಂತರ, ಮೈಸೂರು, ಬಾಗಲಕೋಟಿ, ಬೆಳಗಾವಿ, ಬಳ್ಳಾರಿ, ಬೀದರ, ವಿಜಯಪುರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಧಾರವಾಢ ಗದಗ, ಹಾಸನ, ಹಾವೇರಿ, ಕೊಡಗು, ಕೋಲಾರ, ಕೊಪ್ಪಳ, ಮಂಗಳೂರು, ಮಂಡ್ಯ, ರಾಮನಗರ, ರಾಯಚೂರು, ತುಮಕೂರು, ಉಡುಪಿ, ಯಾದಗಿರಿ, ಶಿವಮೊಗ್ಗ ಮತ್ತು ಕಾರವಾರ ಇವರಿಗೆ, **<u>ನೇಮಕಾತಿ ಅದಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನೆ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿ</u>**
4. ವಿಲೇಖನಾಧಿಕಾರಿಗಳು ನಗರ ಸಿವಿಲ್ ನ್ಯಾಯಾಲಯ, ಬೆಂಗಳೂರು, ಇವರಿಗೆ, ನೇಮಕಾತಿ <u>ಅಧಿಸೂಚನಯನ್ನು ತಮ್ಮ ನ್ಯಾಯಾಲಯದ ಸೂಚನೆ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿ.</u>
5. ಕುಟುಂಬ ನ್ಯಾಯಾಲಯ, ಕಲಬುರಗಿ.
6. ಕಾರ್ಮಿಕ ನ್ಯಾಯಾಲಯ, ಕಲಬುರಗಿ.
7. ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಕಲಬುರಗಿ..
8. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಚಿಂಚೋಳಿ / ಚಿತ್ತಾಪೂರ /ಅಫಲಪೂರ / ಜೇವರ್ಗಿ.
9. ಹಿರಿಯ ಸಿವಿಲ್ ನ್ಯಾಯಾಧೀಶರು, ಸೇಡಂ / ಅಳಂದ
10. ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಕಲಬುರಗಿ / ಚಿಂಚೋಳಿ / ಅಳಂದ.
11. ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸೇಡಂ / ಚಿತ್ತಾಪುರ / ಜೇವರ್ಗಿ / ಅಫಜಲ್‌ಪುರ/ ಶಹಬಾದ.

**<u>ಇವರಿಗೆ, ನೇಮಕಾತಿ ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನೆ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಲಾಗಿದೆ.</u>**

**// ಆದೇಶದ ಮೇರೆಗೆ //**

ಸಹಿ/-

**ಮುಖ್ಯ ಆಡಳಿತಾಧಿಕಾರಿಗಳು**
**ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,**
**ಕಲಬುರಗಿ.**

# ಅರ್ಜಿ ನಮೂನೆ

ಅಭ್ಯರ್ಥಿಯ ಇತ್ತೀಚಿನ ಸ್ವಯಂ ದೃಢೀಕೃತ ಪಾಸ್‌ಪೋರ್ಟ್ ಅಳತೆಯ ಭಾವ ಚಿತ್ರ ಅಂಟಿಸುವುದು.

ಇವರಿಗೆ,

**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**
**ಕಲಬುರಗಿ-585102.**

ತಮ್ಮ ಕಛೇರಿಯ ಅಧಿಸೂಚನೆ ಸಂಖ್ಯೆ: ಜಿನ್ಯಾಕ:ಆಡಳಿತ:    :2018 ದಿನಾಂಕ 03-11-2018ರ ಮೇರೆಗೆ ನಾನು ______________________ ಹುದ್ದೆಗೆ ಅರ್ಜಿಯನ್ನು ಸಲ್ಲಿಸುತ್ತಿದ್ದೇನೆ ಮತ್ತು ಈ ಕೆಳಕಂಡ ಮಾಹಿತಿಯನ್ನು ಒದಗಿಸುತ್ತಿದ್ದೇನೆ.

| | | | | | |
|---|---|---|---|---|---|
| 1 | ಅಭ್ಯರ್ಥಿಯ ಹೆಸರು (ದಪ್ಪ ಅಕ್ಷರಗಳಲ್ಲಿ) | | | | |
| 2 | ತಂದೆಯ/ಗಂಡನ ಹೆಸರು | | | | |
| 3 | ಜನ್ಮ ದಿನಾಂಕ | | | | |
| 4 | ವಯಸ್ಸು (ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಅಭ್ಯರ್ಥಿಯ ವಯಸ್ಸು | ವರ್ಷಗಳು | ತಿಂಗಳುಗಳು | ದಿನಗಳು | |
| | | | | | |
| 5 | ಲಿಂಗ | ಪುರುಷ | ಮಹಿಳೆ | | |
| | | | | | |
| 6 | ರಾಷ್ಟ್ರೀಯತೆ | | | | |
| 7 | ಧರ್ಮ ಮತ್ತು ಜಾತಿ | | | | |
| 8 | ವೈವಾಹಿಕ ಸ್ಥಿತಿ | ವಿವಾಹಿತ | ಅವಿವಾಹಿತ | | |
| | | | | | |
| 9 | ವಿವಾಹಿತರಾದಲ್ಲಿ ಒಂದಕ್ಕಿಂತ ಹೆಚ್ಚು ಜೀವಂತ ಗಂಡ ಅಥವಾ ಹೆಂಡತಿ ಇದ್ದಾರೆಯೇ? | | | | |
| 10 | ನೀವು ಯಾವುದಾದರೂ ಕ್ರಿಮಿನಲ್ ಮೊಕದ್ದಮೆಯಲ್ಲಿ ಭಾಗಿಯಾಗಿದ್ದೀರಾ? | ಹೌದು | ಇಲ್ಲ | | |
| | | | | | |
| 11 | ನೀವು ಸರ್ಕಾರಿ ಸೇವೆಯಿಂದ ಅಥವಾ ಇನ್ನಾವುದಾದರು ಸೇವೆಯಿಂದ ವಜಾ ಆಗಿದ್ದೀರಾ ಅಥವಾ ತೆಗೆದು ಹಾಕಲ್ಪಟ್ಟೀದ್ದೀರಾ? | ಹೌದು | ಇಲ್ಲ | | |
| | | | | | |
| 12 | ನೀವು ಹೈದ್ರಾಬಾದ-ಕರ್ನಾಟಕ ಪ್ರದೇಶದ ಅಭ್ಯರ್ಥಿಯೇ? ಹೌದು ಎಂದಾದಲ್ಲಿ ಸದರೀ ಪ್ರಮಾಣ ಪತ್ರವನ್ನು ಲಗತ್ತಿಸಿದ್ದೀರಾ? | ಹೌದು | ಇಲ್ಲ | | |
| | | | | | |
| 13 | ಕೋರುವ ಮೀಸಲಾತಿಗಳು (ಕೋರುವ ಮೀಸಲಾತಿಯನ್ನು ✓ ಚಿಹ್ನೆ ಹಾಕುವುದರ ಮೂಲಕ ಗುರುತಿಸಿ ಪ್ರಮಾಣ ಪತ್ರದ ಸ್ವಯಂ ದೃಢೀಕೃತ ನಕಲನ್ನು ಲಗ್ತತ್ತಿಸಬೇಕು) | ಸಾಮಾನ್ಯ | ಪ.ಜಾತಿ | ಪ. ಪಂಗಡ | ಪ್ರವರ್ಗ-I |
| | | | | | |
| | | II-ಎ | II-ಬಿ | III-ಎ | III-ಬಿ |
| | | | | | |

| | | | | | | |
|---|---|---|---|---|---|---|
| 14 | ನೀವು ಈ ಯಾವುದಾದರೂ ಮೀಸಲಾತಿ ಅಡಿಯಲ್ಲಿ ಬರುತ್ತೀರ? (ಸೇರುವ ಮೀಸಲಾತಿಯನ್ನು ಚಿಹ್ನೆ ಹಾಕುವುದರ ಮೂಲಕ ಗುರುತಿಸಿ ಪ್ರಮಾಣ ಪತ್ರದ ಸ್ವಯಂ ದೃಢೀಕೃತ ನಕಲನ್ನು ಲಗತ್ತಿಸಬೇಕು | ಗ್ರಾಮೀಣ ಅಭ್ಯರ್ಥಿ | ಕ.ಮಾ.ಅ | ಮಾ. ಸೈ | ಅಂ .ಅ | ಯೋ.ನಿ.ಅ |

| | | | | | |
|---|---|---|---|---|---|
| 15 | **ಶೈಕ್ಷಣಿಕ** ವಿದ್ಯಾರ್ಹತೆ **ವಿವರಗಳು:** (ಸ್ವಯಂ ದೃಢೀಕೃತ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು) | | | | |
| ಉತ್ತೀರ್ಣ ಹೊಂದಿದ ಪರೀಕ್ಷೆಗಳು | | ಉತ್ತೀರ್ಣ ಹೊಂದಿದ ವರ್ಷ ಮತ್ತು ನೊಂದಣಿ ಸಂಖ್ಯೆ | ಗರಿಷ್ಠ ಅಂಕಗಳು | ಪಡೆದಿರುವ ಅಂಕಗಳು | ಶೇಕಡಾವಾರು ಅಂಕಗಳು |
| ಎ | 7ನೇ ತರಗತಿ | | | | |
| ಬಿ | ಎಸ್. ಎಸ್.ಎಲ್.ಸಿ | | | | |
| ಸಿ | ಇತರೆ ಯಾವುದೇ ವಿದ್ಯಾರ್ಹತೆ. | | | | |
| 1 | ಕನ್ನಡ ಬೆರಳಚ್ಚು ಜೂನಿಯರ್ | | | | |
| 2 | ಇಂಗ್ಲೀಷ ಬೆರಳಚ್ಚು ಜೂನಿಯರ್ | | | | |
| 3 | ಕನ್ನಡ ಬೆರಳಚ್ಚು ಸೀನಿಯರ್ | | | | |
| 4 | ಇಂಗ್ಲೀಷ ಬೆರಳಚ್ಚು ಸೀನಿಯರ್ | | | | |
| 5 | ಕನ್ನಡ ಶೀಘ್ರಲಿಪಿ ಸೀನಿಯರ್ | | | | |
| 6 | ಇಂಗ್ಲೀಷ ಶೀಘ್ರಲಿಪಿ ಸೀನಿಯರ್ | | | | |
| 16 | ಅಭ್ಯರ್ಥಿಯು ಭಾರಿ / ಲಘು ವಾಹನ ಚಾಲನೆ ಲೈಸೆನ್ಸ್ ಹೊಂದಿರುವರೇ? (ಹೊಂದಿದಲ್ಲಿ ಚಾಲನೆ ಪರವಾನಿಗೆಯ ಸ್ವಯಂ ದೃಢೀಕೃತ ಪ್ರತಿಯನ್ನು ಲಗತ್ತಿಸುವುದು).(ಆದೇಶ ಜಾರಿಕಾರರ ಹುದ್ದೆಗೆ ಮಾತ್ರ ಅನ್ವಯಿಸುವುದು) | | | | |
| 17 | ಅಭ್ಯರ್ಥಿಯ ಖಾಯಂ ವಿಳಾಸ ಮತ್ತು ದೂರವಾಣಿ ಸಂಖ್ಯೆ. | | | | |
| 18 | ಅಭ್ಯರ್ಥಿಯ ಅಂಚೆ ವಿಳಾಸ ಮತ್ತು ದೂರವಾಣಿ ಸಂಖ್ಯೆ. | | | | |
| 19 | ನಿಮ್ಮ ಸ್ವವಿಳಾಸವಿರುವ ಹಾಗೂ ನೊಂದಾಯಿತ ಅಂಚೆಗೆ ತಗಲುವ ವೆಚ್ಚದ ಅಂಚೆ ಚೀಟಿ ಅಂಟಿಸಿರುವ ಲಕೋಟೆಯನ್ನು ಲಗತ್ತಿಸಿದ್ದೀರಾ? | | | | |

ಈ ಮೇಲೆ ನಮೂದಿಸಿದ ಮಾಹಿತಿ ಮತ್ತು ವಿವರಗಳು ನನಗೆ ತಿಳಿದ ಮಟ್ಟಿಗೆ ಸತ್ಯವಾಗಿದ್ದು ಒಂದು ವೇಳೆ ಅವು ಅಸತ್ಯವೆಂದು ಕಂಡುಬಂದಲ್ಲಿ, ತಾವು ತೆಗೆದುಕೊಳ್ಳುವ ತೀರ್ಮಾನಗಳಿಗೆ ಬದ್ಧನಾಗಿರುತ್ತೇನೆ/ಬದ್ಧಳಾಗಿರುತ್ತೇನೆ. ನಾನು ಆಯ್ಕೆಗೊಂಡರೆ ಕಲಬುರಗಿ ಜಿಲ್ಲಾ ಘಟಕದ ಯಾವುದೇ ನ್ಯಾಯಾಲಯದಲ್ಲಿ ಕರ್ತವ್ಯ ನಿರ್ವಹಿಸಲು ಸಿದ್ಧನಿದ್ದೇನೆ/ಸಿದ್ಧಳಿದ್ದೇನೆ.

ಸ್ಥಳ:

ದಿನಾಂಕ: ಅಭ್ಯರ್ಥಿಯ ಸಹಿ.